ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ಶಿವಣ್ಣ (ಹಣಕಾಸು ರಾಜ್ಯ ಸಚಿವರು) :— ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 1999ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ

"ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 1999ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಅಧ್ಯಕ್ಷರು :— ಒಂದು ಪ್ರಕಟಣೆ ಇದೆ.

## 9. ಪ್ರಕಟಣೆ

ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡಂತೆ ಸಂದೇಶ ಬಂದಿರುತ್ತದೆ.

"ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 118ರ ಮೇರೆಗೆ ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ದಿನಾಂಕ 23-11-2000ರಂದು 2000ನೇ ಸಾಲಿನ ಕರ್ನಾಟಕ ಮಾರಾಟ ತೆರಿಗೆ ಮತ್ತು ಅಬಕಾರಿ ಕಾನೂನು (ತಿದ್ದುಪಡಿ) ವಿಧೇಯಕವನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿದೆ"

## 10. ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

### (i) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಯಲಗಳ ವಿಧೇಯಕ 2000 ಪರ್ಯಾಲೋಚನಾ ಪ್ರಸ್ತಾವ

ಡಾ: ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :— ಮಾನ್ಯ ಅಧ್ಯಕ್ಷರೆ, ಇವತ್ತು ನಮ್ಮ ರಾಷ್ಟ್ರ, ಪ್ರಪಂಚದಲ್ಲಿ ಶಿಕ್ಷಣ ಕ್ಷೇತ್ರ ಬಹಳಷ್ಟು ಬದಲಾವಣೆಯನ್ನು ನಿರಾತಂಕವಾಗಿ ಕಂಡುಕೊಂಡು ಬಂದಿದೆ. ರಾಜ್ಯದಲ್ಲಿ ಮೈಸೂರು ವಿಶ್ವವಿದ್ಯಾನಿಲಯ, ಕರ್ನಾಟಕ ವಿಶ್ವವಿದ್ಯಾನಿಲಯ ಮತ್ತು ಬೆಂಗಳೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಲಾಗಿದ್ದು